**ಸಾಕ್ಷಿ ಯನ್ನು ದಿನಾಂಕ: 22-04-2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

ಈ ದಿನ ನನ್ನ ಮುಖ್ಯ ವಿಚಾರಣೆ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತವೆ. ಸದರಿ ಪ್ರಮಾಣ ಪತ್ರವನ್ನು ತಯಾರಿಸಲು ವಕೀಲರಿಗೆ ನಾನೇ ಮಾಹಿತಿ ನೀಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಸಂಗತಿಗಳನ್ನು ವಕೀಲರು ನನಗೆ ಓದಿ ತಿಳಿಸಿರುತ್ತಾರೆ. ಆದ್ದರಿಂದ, ನನ್ನ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆ ಎಂದು ಪರಿಗಣಿಸಬೇಕಾಗಿ ಕೋರುತ್ತೇನೆ.

**ಮುಂದುವರೆದ ಮುಖ್ಯ ವಿಚಾರಣೆ :- ಪ್ರತಿವಾದಿ ಪರ ವಕೀಲರಿಂದಃ**

ವಂಶವೃಕ್ಷದ ಪ್ರಮಾಣ ಪತ್ರವನ್ನು ನಿಡಿ-1 ಎಂದು, 3 - ಪಹಣಿ ಪತ್ರಿಕೆಗಳನ್ನು ನಿಡಿ-2 ರಿಂದ 4 ಎಂದು, ಅಸಲು ದಾವಾ ನಂ.416/1996 ರ ತೀರ್ಪು ಮತ್ತು ಡಿಕ್ರಿಯ ದೃಢೀಕೃತ ನಕಲುಗಳನ್ನು ನಿಡಿ-5 ಮತ್ತು 6 ಎಂದು, ಆರ್.ಎ. ನಂ.179/1998-99 ರ ಆದೇಶದ ದೃಢೀಕೃತ ನಕಲನ್ನು ನಿಡಿ-7 ಎಂದು, ಮ್ಯೂಟೇಶನ ರಿಜಿಸ್ಟರ್ ನ್ನು ನಿಡಿ-8 ಎಂದು ಗುರುತಿಸಲಾಯಿತು.

**(**ವಾದಿ ಪರ ವಕೀಲರು ಕಾಲಾವಕಾಶ ಕೋರಿದ್ದರಿಂದ ಸಾಕ್ಷಿಯ ಮುಂದುವರೆದ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು**).**

**(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).**

**ಓ.ಹೇ.ಕೇ.ಸ.ಇ.ಎ. ಒಪ್ಪಿಕೊಂಡಿರುತ್ತಾರೆ,**

**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ದೇವನಹಳ್ಳಿ.**